**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/233/ಗ್ರಾಪಂಕಾ/2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 10-03-2014.

**ಇವರಿಂದ:**

ಸರ್ಕಾರದ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

**ಇವರಿಗೆ:**

ನೊಂದಣಿ ಮಹಾ ಪರಿವೀಕ್ಷಕರು,
ಹಾಗೂ ಮುದ್ರಾಂಕಗಳ ಆಯುಕ್ತರು,
8ನೇ ಮಹಡಿ, ಕಂದಾಯ ಭವನ,
ಕೆ.ಜಿ. ರಸ್ತೆ, ಬೆಂಗಳೂರು.

ಮಾನ್ಯರೆ,

**ವಿಷಯ:** ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿನ ಸ್ಥಿರಾಸ್ತಿಗಳಿಗೆ ಸಂಬಂಧಿಸಿದಂತೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಡಿಜಿಟಲ್ ಸಹಿ ಮೂಲಕ ನೀಡಿದ ನಮೂನೆ-9, 11ಎ ಮತ್ತು 11ಬಿ ಗಳನ್ನು ಮಾತ್ರ ನೊಂದಣಿಗೆ ಪರಿಗಣಿಸುವ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಸುತ್ತೋಲೆ ಸಂಖ್ಯೆ ಗ್ರಾಅಪ 83 ಗ್ರಾಪಂಅ 2013 (ಭಾ-6) ದಿ:03-02-2014.
2. ತಮ್ಮ ಜ್ಞಾಪನ ಸಂಖ್ಯೆ: ಆರ್‌ಜಿಎನ್:83/2003-04 ದಿ:15-02-2014.

****

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳ ಕಡೆಗೆ ತಮ್ಮ ಗಮನ ಸೆಳೆಯಲಾಗಿದೆ.

ಉಲ್ಲೇಖ (1) ರ ಸರ್ಕಾರದ ಸುತ್ತೋಲೆಯಲ್ಲಿ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಕ್ರಮಬದ್ಧ ಆಸ್ತಿಗಳಿಗೆ 1) ಗ್ರಾಮ ಠಾಣಾ ವ್ಯಾಪ್ತಿಯೊಳಗಿರುವ ಆಸ್ತಿ/ ನಿವೇಶನ, 2) ವಸತಿ ಯೋಜನೆಯಡಿ ಸೃಜಿಸಿರುವ ಆಸ್ತಿ, 3) ಭೂ ಪರಿವರ್ತನೆಯಾದ ವ್ಯವಸಾಯದ ಜಮೀನಿನಲ್ಲಿ ನಗರಾಭಿವೃದ್ಧಿ ಇಲಾಖೆಯ ಸಕ್ಷಮ ಯೋಜನಾ ಪ್ರಾಧಿಕಾರದಿಂದ ಬಡಾವಣೆ ನಕ್ಷೆ ಅನುಮೋದನೆಯೊಂದಿಗೆ ಸೃಜಿಸಲಾದ ಆಸ್ತಿಗಳು ಮತ್ತು 4) Single Plot Approval ನಲ್ಲಿ ಕಟ್ಟಡ ನಿರ್ಮಾಣಕ್ಕೆ ಪರವಾನಿಗೆ ಪಡೆದ ಆಸ್ತಿಗಳಿಗೂ ನಮೂನೆ-9, ನಮೂನೆ-11ಎ ಗಳನ್ನು ನೀಡಲಾಗುತ್ತಿದೆ.

ಕ್ರಮಬದ್ಧವಲ್ಲದ ಆಸ್ತಿಗಳಿಗೆ 1) ದಿನಾಂಕ:14-06-2013 ಕ್ಕಿಂತ ಮುಂಚೆ 1, 2 ಅಥವಾ 3 ಬಾರಿ ಮಾರಾಟ ಹಾಗೂ ಕ್ರಯಗಳಿಗೆ ಒಳಪಟ್ಟಿರುವ ನಿವೇಶನಗಳು, 2) ದಿನಾಂಕ:14-06-2013ಕ್ಕೆ ಮೊದಲು ಕಟ್ಟಡವಾಗಿದ್ದು, ಈ ದಿನಾಂಕಕ್ಕಿಂತ ಮುಂಚಿನ 6 ತಿಂಗಳ ಪೂರ್ವದ ಯಾವುದಾದರೂ ಒಂದು ತಿಂಗಳ ವಿದ್ಯುಚ್ಛಕ್ತಿ ಬಿಲ್ಲನ್ನು ಒದಗಿಸಿರುವ ಪ್ರಕರಣಗಳು, 3) ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಪ್ರಕರಣ 95 (1) ರನ್ವಯ ಫಾರಂ ಬಿಲ್ಡಿಂಗ್ / ಹೌಸ್ ಎಂದು ಪರಿಗಣಿಸುವ ಆಸ್ತಿಗಳು ಮತ್ತು 4) ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಪ್ರಕರಣ 95 (2) ರನ್ವಯ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿನ ಆಸ್ತಿಗಳಿಗೆ ಸಂಬಂಧಿಸಿದಂತೆ ನಮೂನೆ-11ಬಿ ಅನ್ನು ಪಡೆದು ಉಪನೊಂದಾಣಾಧಿಕಾರಿಗಳ ಕಛೇರಿಯಲ್ಲಿ ನೊಂದಾಯಿಸಬಹುದೆಂದು ತಿಳಿಸಿರುತ್ತದೆ. ಗ್ರಾಮ ಪಂಚಾಯತಿಗಳು ನಮೂನೆ-11ಬಿ ನೀಡಿದ ಎಲ್ಲಾ ಆಸ್ತಿಗಳನ್ನು ಉಪನೊಂದಾಣಾಧಿಕಾರಿಗಳು ಕಡ್ಡಾಯವಾಗಿ ನೊಂದಾಯಿಸುವ ಅವಶ್ಯಕತೆ ಇರುವುದಿಲ್ಲ. ಮೇಲ್ಕಂಡ 4 ವಿಧಗಳ ಆಸ್ತಿಗಳಿಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯತಿಗಳು ವಿತರಿಸಿರುವ ನಮೂನೆ-11ಬಿ ರ ಷರಾದ ಆಧಾರದ ಮೇಲೆ ಮಾತ್ರ ಉಪನೊಂದಾಣಾಧಿಕಾರಿಗಳ ಕಛೇರಿಯಲ್ಲಿ ನೊಂದಾಯಿಸಬಹುದಾಗಿರುತ್ತದೆ.

ಉಲ್ಲೇಖ (2) ರ ಜ್ಞಾಪನದಲ್ಲಿ ನೊಂದಣಿ ಮಹಾ ಪರಿವೀಕ್ಷಕರು ಹಾಗೂ ಮುದ್ರಾಂಕಗಳ ಆಯುಕ್ತರು ಗ್ರಾಮ ಪಂಚಾಯತಿ ಪ್ರದೇಶದ ವ್ಯಾಪ್ತಿಗೊಳಪಡುವ ಸ್ಥಿರಾಸ್ತಿಗಳಿಗೆ ಸಂಬಂಧಿಸಿದ ದಸ್ತಾವೇಜುಗಳಿಗೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಂದ ಡಿಜಿಟಲ್ ಸಹಿ ಮೂಲಕ ನಮೂನೆ-9 ಮತ್ತು 11ಎ ಅಥವಾ ನಮೂನೆ-9 ಮತ್ತು 11ಬಿ ಗಳನ್ನು ಮಾತ್ರ ನೊಂದಣಿಗೆ ಸ್ವೀಕರಿಸಿ, ತತ್ಸಂಬಧಿತ ದಸ್ತಾವೇಜುಗಳನ್ನು ನೊಂದಾಯಿಸಲು ಸೂಚಿಸಿರುವುದು ಸಮಂಜಸವೆನಿಸುವುದಿಲ್ಲ.

ಆದುದರಿಂದ ಉಲ್ಲೇಖ (2)ರ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಿರುವಂತೆ ಕ್ರಮಬದ್ಧ ಆಸ್ತಿಗಳಿಗೆ ನಮೂನೆ-9, ನಮೂನೆ-11ಎ ಗಳನ್ನು ಹಾಗೂ ಕ್ರಮಬದ್ಧವಲ್ಲದ ಆಸ್ತಿಗಳಿಗೆ ನಮೂನೆ-11ಬಿ ಅನ್ನು ಮಾತ್ರ ನೀಡಲಾಗುತ್ತಿದ್ದು, ಅದಕ್ಕೆ ನಮೂನೆ-9 ರ ಅಗತ್ಯವಿರುವುದಿಲ್ಲವೆಂದು ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

10/3/14

(ಕೆ. ಯಾಲಕ್ಕಿಗೌಡ)
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.